ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 26/3/21

### ಇನ್ನೊಂದು ವಿಡಿಯೊ ಹರಿಯಬಿಟ್ಟ ಯುವತಿ • ಜಾರಕಿಹೊಳಿ ಮೊಬೈಲ್ ಫೋನ್ ವಶಕ್ಕೆ

# ಸಿ.ಡಿ: ಮತ್ತೊಂದು 'ಮಹಾ' ತಿರುವು

ಪ್ರಜಾವಾಣಿ ವಾರ್ತೆ 26-3-21

ಬೆಂಗಳೂರು: ಸಿ.ಡಿ. ಪ್ರಕರಣದಲ್ಲಿ ಭಾಗಿಯಾಗಿದ್ದಾರೆನ್ನಲಾದ ಯುವತಿ ಗುರುವಾರ ಎರಡನೇ ವಿಡಿಯೊ ಹರಿಯ ಬಿಟ್ಟಿದ್ದು, ಎಸ್‌ಐಟಿ ವಿರುದ್ಧ ಹರಿಹಾಯ್ದಿದ್ದಾರೆ. ಏತನ್ಮಧ್ಯೆ, ಪ್ರಕರಣಕ್ಕೆ ಮಹತ್ವದ ಪುರಾವೆಯಾದ ಮೂಲ ವಿಡಿಯೊವನ್ನು ತನಿಖಾ ಅಧಿಕಾರಿಗಳು ಪತ್ತೆ ಮಾಡಿದ್ದಾರೆ.

ಈ ಬೆಳವಣಿಗೆಯ ಮಧ್ಯೆಯೇ, 'ತನಗೆ ಯುವತಿಯ ಪರಿಚಯವೇ ಇಲ್ಲ' ಎಂದು ಹೇಳಿಕೆ ನೀಡಿದ್ದ ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ಅವರ ಮೊಬೈಲ್ ಫೋನ್ ಜಪ್ತಿ ಮಾಡಿರುವ ಅಧಿಕಾರಿಗಳು ತನಿಖೆಗೆ ಮತ್ತೊಂದು ಆಯಾಮವನ್ನು ನೀಡಿದ್ದಾರೆ.

'ನನಗೆ ರಕ್ಷಣೆ ನೀಡಿ' ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಅವರನ್ನು ಉದ್ದೇಶಿಸಿ ಮನವಿ ಮಾಡಿರುವ ವಿಡಿಯೊ ಹರಿಬಿಟ್ಟಿದ್ದ ಯುವತಿ, ಇದೀಗ 1 ನಿಮಿಷ 13 ಸೆಕೆಂಡ್‌ಗಳ ಮತ್ತೊಂದು ವಿಡಿಯೊವನ್ನು ಮಾಧ್ಯಮಗಳಿಗೆ ತಲುಪಿಸಿದ್ದಾರೆ. ಹೊಸ ವಿಡಿಯೊದಲ್ಲಿ ಯುವತಿ ಪ್ರಸ್ತಾಪಿಸಿರುವ ವಿಷಯ, ವಿಚಾರಣೆಗೆ ಮತ್ತೊಂದು ತಿರುವು ನೀಡುವ ಸಾಧ್ಯತೆ ಇದೆ ಎಂದೂ ಹೇಳಲಾಗುತ್ತಿದೆ.

ಪೊಲೀಸ್ ಕಮಿಷನರ್‌ಗೆ ಕಳುಹಿಸಿರುವ ವಿಡಿಯೊ ಸೋರಿಕೆಯಾಗಿರುವ ಬಗ್ಗೆ ಯುವತಿ ವ್ಯಕ್ತಪಡಿಸಿರುವ ಸಂದೇಹ ಚರ್ಚೆಗೂ ಗ್ರಾಸವಾಗಿದೆ.



ಸಚಿವ ಕೆ. ಸುಧಾಕರ್ ಹೇಳಿಕೆ ಖಂಡಿಸಿ ಕೆಪಿಸಿಸಿ ಮಹಿಳಾ ಘಟಕದ ಅಧ್ಯಕ್ಷೆ ಪುಷ್ಪಾ ಅಮರನಾಥ್; ಶಾಸಕಿಯರಾದ ಸೌಮ್ಯಾ ರೆಡ್ಡಿ, ಲಕ್ಷ್ಮಿ ಹೆಬ್ಬಾಳ್ಕರ್; ರೂಪಾ ಶಶಿಧರ್ ಮತ್ತಿತರರು ಬೆಂಗಳೂರಿನ ಕಾಂಗ್ರೆಸ್ ಭವನದ ಎದುರು ಗುರುವಾರ ಪ್ರತಿಭಟನೆ ನಡೆಸಿದರು

> **ರಮೇಶ ಬಳಿ ಇರುವ ದಾಖಲೆಗಳನ್ನು ಬಿಡುಗಡೆ ಮಾಡುವುದು ಬೇಡ ಎಂದು ಹೇಳಿದವರು ಯಾರು? ಅದರಲ್ಲಿ ಶಾಕ್ ಆದರೂ ಇರಲಿ, ಏನಾದರೂ ಇರಲಿ. ಅವರಿಗೆ ಒಳ್ಳೆಯದಾಗಲಿ ಪಾಪ**
> **ಡಿ.ಕೆ. ಶಿವಕುಮಾರ್**, ಕೆಪಿಸಿಸಿ ಅಧ್ಯಕ್ಷ

**ವಿಡಿಯೊದಲ್ಲಿ ಹೇಳಿದ್ದೇನು?:** 'ನ್ಯಾಯ ಕೇಳಿ ಒಂದು ವಿಡಿಯೊ ಮಾಡಿದ್ದೆ. ಪೊಲೀಸ್ ಕಮಿಷನರ್ ಕಚೇರಿ ಹಾಗೂ ಎಸ್‌ಐಟಿಯವರಿಗೆ ಮಾರ್ಚ್ 12ರಂದು ತಲುಪಿಸಿದ್ದೆ. ಮರುದಿನ ಮಾ. 13ರಂದು ತರಾತುರಿಯಲ್ಲಿ ರಮೇಶ ಜಾರಕಿಹೊಳಿ ದೂರು ಕೊಟ್ಟಿದ್ದಾರೆ. ಅದಾಗಿ ಅರ್ಧ ಗಂಟೆಗೆ ನನ್ನ ವಿಡಿಯೊ ಹೊರಗೆ ಬಿಡಲಾಗಿದೆ. ಹಾಗಾದರೆ, ಎಸ್‌ಐಟಿ ಯಾರ ಪರವಿದೆ ? ಯಾರನ್ನು ರಕ್ಷಣೆ ಮಾಡುತ್ತಿದೆ' ಎಂದು ಯುವತಿ ಪ್ರಶ್ನಿಸಿದ್ದಾರೆ.

4ನೇ ಪುಟ ನೋಡಿ

ಇನ್ನಷ್ಟು ಸುದ್ದಿಗಳು 4

## 'ಮಹಾನಾಯಕನ ಹೆಸರು ಬಹಿರಂಗ'

ಬೆಂಗಳೂರು: 'ಸಿ.ಡಿ ಪ್ರಕರಣದಲ್ಲಿ ಷಡ್ಯಂತ್ರ ನಡೆಸಿರುವ 'ಮಹಾನಾಯಕ'ನ ಹೆಸರನ್ನು ಶೀಘ್ರವೇ ಬಹಿರಂಗಪಡಿಸಲಿದ್ದೇನೆ. ನಾನೂ ಕೂಡ ಸಾಕ್ಷ್ಯ ಸಂಗ್ರಹಿಸಿದ್ದು, ಆ ಕುರಿತ ಮಾಹಿತಿ ಕೇಳಿದರೆ ಶಾಕ್ ಆಗುತ್ತೀರಾ' ಎಂದು ಬಿಜೆಪಿ ಶಾಸಕ ರಮೇಶ ಜಾರಕಿಹೊಳಿ ಹೇಳಿದ್ದಾರೆ.

ಯುವತಿ ಬಿಡುಗಡೆ ಮಾಡಿರುವ ಎರಡನೇ ವಿಡಿಯೊ ಕುರಿತು ಪ್ರತಿಕ್ರಿಯೆ ನೀಡಿದ ಅವರು, 'ಇದು ಪಕ್ಕಾ ಷಡ್ಯಂತ್ರ, ನನ್ನ ವಿರುದ್ಧ ಇನ್ನು 10 ಸಿ.ಡಿಗಳು ಬಂದರೂ ಹೆದರುವುದಿಲ್ಲ. ನಮ್ಮ ಬಳಿಯೂ ಬೆಚ್ಚಿ ಬೀಳಿಸುವ ದಾಖಲೆಗಳಿವೆ' ಎಂದರು.

'ಷಡ್ಯಂತ್ರ ಮಾಡಿದವರನ್ನು ಜೈಲಿಗೆ ಹಾಕುವವರೆಗೂ ಬಿಡುವುದಿಲ್ಲ. ನಿರ್ದೋಷಿಯಾಗಿ ಹೊರಬರುತ್ತೇನೆ. ಈ ವಿಷಯವಾಗಿ ಚರ್ಚೆ ಮಾಡುತ್ತಿರುವವರ ಮೇಲೂ ನಾಳೆ ಸಿ.ಡಿ ಬರಬಹುದು. ಪ್ರಕರಣಕ್ಕೆ ಸಂಬಂಧಿಸಿದಂತೆ ಸಂಗ್ರಹಿಸಿದ ಸಾಕ್ಷ್ಯಗಳು ನನ್ನ ಜೇಬಿನಲ್ಲೇ ಇವೆ' ಎಂದರು.

'ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಬಗ್ಗೆ ಗೌರವ ಇತ್ತು. ಆದರೆ, ನನ್ನ ವಿರುದ್ಧವೇ ಅತ್ಯಾಚಾರ ಪ್ರಕರಣ ದಾಖಲಿಸಿ ಎಂದು ಹೇಳಿದ ಬಳಿಕ ಆ ಗೌರವ ಹೋಯಿತು' ಎಂದೂ ರಮೇಶ ಜಾರಕಿಹೊಳಿ ಹೇಳಿದರು.

## 'ರಕ್ಷಣೆಗೆ ಪ್ರಧಾನಿ ಮೊರೆ ಹೋಗಿ'

ಬೀದರ್: 'ರಮೇಶ ಜಾರಕಿಹೊಳಿ ಅವರದ್ದು ಎನ್ನಲಾದ ಸಿ.ಡಿ. ಪ್ರಕರಣದ ಯುವತಿಯ ಜೀವಕ್ಕೆ ಅಪಾಯವಾಗುವ ಪರಿಸ್ಥಿತಿ ಬರಬಾರದು ಎಂದಾದರೆ ಗುಪ್ತ ಸ್ಥಳದಲ್ಲಿ ಕುಳಿತು ವಿಡಿಯೊ ಬಿಡುಗಡೆ ಮಾಡುವುದು ಬಿಡಬೇಕು. ನೇರವಾಗಿ ಮುಖ್ಯ ನ್ಯಾಯಮೂರ್ತಿಗಳನ್ನು ಭೇಟಿ ಮಾಡಿ ರಕ್ಷಣೆ ಪಡೆಯಬೇಕು. ರಾಜ್ಯ ಸರ್ಕಾರದ ಮೇಲೆ ನಂಬಿಕೆ ಇಲ್ಲದಿದ್ದರೆ ಪ್ರಧಾನಮಂತ್ರಿಗೆ ಸಂದೇಶ ಕಳುಹಿಸಿ ರಕ್ಷಣೆ ಪಡೆಯಬೇಕು' ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಎಚ್.ಡಿ. ಕುಮಾರಸ್ವಾಮಿ ಸಲಹೆ ಮಾಡಿದರು.

4ನೇ ಪುಟ ನೋಡಿ

## ‘ರಕ್ಷಣೆಗೆ ಪ್ರಧಾನಿ ಮೊರೆ ಹೋಗಿ’

ಒಂದನೇ ಪುಟದಿಂದ...

‘ಯುವತಿ ಹಾಗೂ ಅವರ ಕುಟುಂಬದವರಿಗೆ ರಕ್ಷಣೆ ನೀಡುವುದು ಸರ್ಕಾರದ ಜವಾಬ್ದಾರಿ. ಯುವತಿಯನ್ನು ಅಜ್ಞಾತ ಸ್ಥಳದಲ್ಲಿ ಬಿಜೆಪಿಯವರು ಇಟ್ಟುಕೊಂಡಿದ್ದಾರೋ ಅಥವಾ ಕಾಂಗ್ರೆಸ್‌ನವರು ಇಟ್ಟುಕೊಂಡಿದ್ದಾರೋ ಗೊತ್ತಿಲ್ಲ. ಒಟ್ಟಾರೆ ಆ ಹೆಣ್ಣುಮಗಳು ಯಾರದೋ ಕುತಂತ್ರಕ್ಕೆ ಒಳಗಾಗಿದ್ದಾಳೆ’ ಎಂದು ಬಸವಕಲ್ಯಾಣದಲ್ಲಿ ಗುರುವಾರ ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು.

‘ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರ ನಡವಳಿಕೆಯಿಂದ ರಾಜ್ಯ ರಾಜಕಾರಣ ನಗೆಪಾಟಲಿಗೆ ಗುರಿಯಾಗಿವೆ. ಸಿ.ಡಿ ಪ್ರಕರಣದ ಬಗ್ಗೆ ಹೆಚ್ಚು ಮಾತನಾಡಲು ಇಷ್ಟಪಡುವುದಿಲ್ಲ. ಕೊಳಚೆಯಲ್ಲಿ ಬಿದ್ದಿದ್ದೇವೆ. ಅದನ್ನು ಸರಿಪಡಿಸಬೇಕಿದೆ’ ಎಂದು ಅವರು ಹೇಳಿದರು.

‘ಎಸ್‌ಐಟಿ ರಾಜ್ಯ ಸರ್ಕಾರದ ಸಂಸ್ಥೆಯಾಗಿದೆ. ಬಿಜೆಪಿ ಸರ್ಕಾರ ಅದನ್ನು ಹೇಗೆ ಬಳಕೆ ಮಾಡಿಕೊಳ್ಳುತ್ತಿದೆ. ಹಿಂದೆ ಸಿದ್ದರಾಮಯ್ಯ ಸರ್ಕಾರ ಯಾವ ರೀತಿ ಬಳಕೆ ಮಾಡಿಕೊಂಡಿತ್ತು ಎನ್ನುವುದು ಎಲ್ಲರಿಗೂ ಗೊತ್ತಿದೆ. ಯುವತಿ ರಕ್ಷಣೆಗಾಗಿ ಪ್ರಧಾನಿಯ ಮೊರೆ ಹೋಗುವುದು ಸೂಕ್ತ’ ಎಂದು ಅಭಿಪ್ರಾಯಪಟ್ಟರು.

ಇದಕ್ಕೂ ಮುನ್ನ ಕಲಬುರ್ಗಿಯಲ್ಲಿ ಮಾತನಾಡಿದ ಅವರು, ‘ಸಂತ್ರಸ್ತ ಯುವತಿಗೆ ರಕ್ಷಣೆ ಬೇಕಿದ್ದರೆ ಸಭಾಧ್ಯಕ್ಷರ ಮುಂದೆ ಬಂದು ಮನವಿ ಮಾಡಿಕೊಳ್ಳಲಿ. ಅದನ್ನು ಬಿಟ್ಟು ಎಲ್ಲೆಲ್ಲಿಂದಲೋ ವಿಡಿಯೊ ಮಾಡಿ ಹೇಳಿಕೆ ಕೊಟ್ಟರೆ ಹೇಗೆ’ ಎಂದು ಪ್ರಶ್ನಿಸಿದರು.

# ಸಿ.ಡಿ: ಮತ್ತೊಂದು ‘ಮಹಾ’ ತಿರುವು

ಒಂದನೇ ಪುಟದಿಂದ 24-3-21 ಪ್ರ.ವಾ.

‘ನನ್ನನ್ನು ಅಪಹರಣ ಮಾಡಲಾಗಿದೆ ಎಂದು ಅಪ್ಪ-ಅಮ್ಮ ಸ್ವ-ಇಚ್ಛೆಯಿಂದ ದೂರು ಕೊಟ್ಟಿರುವುದಕ್ಕೆ ಸಾಧ್ಯವೇ ಇಲ್ಲ. ಅವರಿಗೆ, ಮಗಳು ಯಾವುದೇ ತಪ್ಪು ಮಾಡಿಲ್ಲವೆಂಬುದು ಗೊತ್ತು. ಅಪ್ಪ-ಅಮ್ಮನಿಗೆ ರಕ್ಷಣೆ ನೀಡಬೇಕು. ಅವರು ಸುರಕ್ಷಿತವಾಗಿದ್ದಾರೆ ಎಂಬುದು ಯಾವಾಗ ಗೊತ್ತಾಗುತ್ತದೆಯೋ ಅವಾಗಲೇ ಎಸ್‌ಐಟಿ ಮುಂದೆ ಹಾಜರಾಗುವೆ’ ಎಂದೂ ಯುವತಿ ಹೇಳಿದ್ದಾರೆ.

‘ಅಪ್ಪ-ಅಮ್ಮನಿಗೆ ಭದ್ರತೆ ಕೊಡಿ ಎಂದು ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ರಮೇಶ್ ಕುಮಾರ್ ಅವರಿಗೆ ಹಾಗೂ ಇನ್ನಿತರ ಮಹಿಳಾ ಸಂಘಟನೆಗಳಿಗೆ ಕೇಳಿಕೊಳ್ಳುತ್ತೇನೆ’ ಎಂದಿದ್ದಾರೆ.

ಮೂಲ ವಿಡಿಯೊ ಪತ್ತೆ: ‘ವ್ಯಾನಿಟಿ ಬ್ಯಾಗ್‌ನಲ್ಲಿ ಕ್ಯಾಮೆರಾ ಇಟ್ಟು ವಿಡಿಯೊ ಚಿತ್ರೀಕರಣ ಮಾಡಲಾಗಿದ್ದು, ಎಲ್ಲರ ಮುಖ ಸ್ಪಷ್ಟವಾಗಿ ದಾಖಲಾಗಿದೆ. ಈ ಮೂಲ ವಿಡಿಯೊ ಸಿಕ್ಕಿದ್ದು, ಮೇಲ್ನೋಟಕ್ಕೆ ಅಸಲಿಯಂತೆ ಕಾಣುತ್ತಿದೆ. ಪರೀಕ್ಷೆಗಾಗಿ ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ’ ಎಂದು ಎಸ್‌ಐಟಿ ಮೂಲಗಳು ಹೇಳಿವೆ.

ಮೊಬೈಲ್ ಸಹ ಜಪ್ತಿ: ‘ಯುವತಿ ಯಾರು ಎಂಬುದು ಗೊತ್ತಿಲ್ಲ. ಆಕೆಯ ಜೊತೆ ವಾಟ್ಸ್‌ಆ್ಯಪ್ ಚಾಟಿಂಗ್ ಸಹ ಮಾಡಿಲ್ಲ’ ಎಂದು ರಮೇಶ ಜಾರಕಿಹೊಳಿ ಹೇಳಿಕೆ ನೀಡಿದ್ದರು.

ಅಧಿಕಾರಿಗಳು ಪರ್ಯಾಯ ಪ್ರಶ್ನೆ ಕೇಳಿದಾಗ, ‘ನನ್ನ ವಕೀಲರನ್ನು ಕೇಳಿ ತಿಳಿಸುವೆ’ ಎಂದಷ್ಟೇ ರಮೇಶ ಹೇಳಿದ್ದರು. ಆದರೆ, ವಾಟ್ಸ್‌ಆ್ಯಪ್ ಚಾಟಿಂಗ್ ಚಿತ್ರ ಹಾಗೂ ವಿಡಿಯೊ ಕರೆಗಳ ದೃಶ್ಯ ಎಲ್ಲೆಡೆ ಹರಿದಾಡುತ್ತಿವೆ. ಹೀಗಾಗಿ, ರಮೇಶ್ ಅವರ ಮೊಬೈಲ್ ವಶಕ್ಕೆ ಪಡೆದಿರುವ ಎಸ್‌ಐಟಿ ಅಧಿಕಾರಿಗಳು, ಪರೀಕ್ಷೆಗಾಗಿ ಅದನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳುಹಿಸಿದ್ದಾರೆ.

## ಎಸ್‌ಐಟಿ ಯಾರ ಪರ–ವಿರುದ್ಧವೂ ಅಲ್ಲ: ಬೊಮ್ಮಾಯಿ

ಬೆಂಗಳೂರು: ‘ಸಿ.ಡಿ ಪ್ರಕರಣದಲ್ಲಿ ಎಸ್‌ಐಟಿ ತನಿಖೆ ಯಾರ ಪರವೂ ಅಲ್ಲ, ಯಾರ ವಿರುದ್ಧವೂ ಇಲ್ಲ. ಸತ್ಯ ಹೊರಗೆ ಬರಬೇಕಿದೆ. ತನಿಖೆಯಲ್ಲಿ ಮಧ್ಯಪ್ರವೇಶ ಮಾಡುವುದಿಲ್ಲ’ ಎಂದು ಗೃಹ ಸಚಿವ ಬಸವರಾಜ ಬೊಮ್ಮಾಯಿ ಹೇಳಿದರು.

‘ತನಿಖೆಯ ಸಂದರ್ಭದಲ್ಲಿ ಹಲವು ಬೆಳವಣಿಗೆಗಳು, ತಿರುವುಗಳು ನಡೆಯುತ್ತವೆ. ಅವನ್ನೆಲ್ಲ ಸಕಾರಾತ್ಮಕವಾಗಿ ತೆಗೆದುಕೊಂಡು ನಿಷ್ಪಕ್ಷಪಾತವಾಗಿ ಎಸ್‌ಐಟಿ ತನಿಖೆ ನಡೆಸಲಿದೆ’ ಎಂದರು.

‘ನಿಷ್ಪಕ್ಷಪಾತ ತನಿಖೆ ನಡೆಯಬೇಕೆಂಬ ಕಾರಣಕ್ಕೆ ರಮೇಶ ಜಾರಕಿಹೊಳಿ ಅವರನ್ನೂ ವಿಚಾರಣೆ ನಡೆಸಲಾಗಿದೆ. ಆ ಯುವತಿಯ ಹೇಳಿಕೆ ಪಡೆಯಲು ಸಿದ್ಧರಿದ್ದೇವೆ ಎಂದು ಎಸ್‌ಐಟಿ ಅಧಿಕಾರಿಗಳು ಹೇಳಿದ್ದಾರೆ. ಯುವತಿ ಎಲ್ಲಿದ್ದಾರೆ ಎಂದು ಹೇಳಿದರೆ ಅಲ್ಲಿಗೇ ಮಹಿಳಾ ಪೊಲೀಸರ ಕಳುಹಿಸಿ ರಕ್ಷಣೆ ಕೊಡುತ್ತೇವೆ. ಪೊಲೀಸರ ರಕ್ಷಣೆಯಲ್ಲಿ ಆಕೆ ಹೇಳಿಕೆ ಕೊಡಬಹುದು’ ಎಂದರು.

## ಎಸ್‌ಐಟಿ ಅಧಿಕಾರಿಗಳ ಸಭೆ

ಯುವತಿ ವಿದಿಯೊ ಬಿಡುಗಡೆ ಮಾಡುತ್ತಿದ್ದಂತೆ ಎಸ್‌ಐಟಿ ಅಧಿಕಾರಿಗಳು ನಗರ ಕಮಿಷನರ್ ಕಚೇರಿಯಲ್ಲಿ ಗುರುವಾರ ಸಭೆ ನಡೆಸಿದರು.

ಎಸ್‌ಐಟಿ ಮುಖ್ಯಸ್ಥ ಸೌಮೇಂದು ಮುಖರ್ಜಿ, ‘ಪ್ರಕರಣ ಗಮನಕ್ಕೆ ಬಂದು 23 ದಿನವಾದರೂ ಯುವತಿಯನ್ನು ಪತ್ತೆ ಹಚ್ಚಲು ಆಗಿಲ್ಲವೇಕೆ ? ಪ್ರಕರಣದ ಹಿಂದೆ ಯಾರಿದ್ದಾರೆ ಎಂಬುದನ್ನು ತಿಳಿಯಲು ಕಷ್ಟವೇ? ಯುವತಿ ಎರಡನೇ ವಿಡಿಯೊ ಹರಿಬಿಟ್ಟಿದ್ದು, ಅದು ಬಂದಿದ್ದು ಎಲ್ಲಿಂದ’ ಎಂಬುದಾಗಿ ಅಧಿಕಾರಿಗಳನ್ನು ಪ್ರಶ್ನಿಸಿದ್ದಾರೆಂದು ಗೊತ್ತಾಗಿದೆ.

## ಯುವತಿಗೆ ರಕ್ಷಣೆ ನಮ್ಮ ಹೊಣೆ: ಸಚಿವೆ ಶಶಿಕಲಾ ಜೊಲ್ಲೆ

ಬೆಂಗಳೂರು: ‘ಸಿ.ಡಿ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ ಎನ್ನಲಾದ ಯುವತಿಗೆ ರಕ್ಷಣೆ ನೀಡಲು ನಾವು ಹಿಂದೇಟು ಹಾಕುವುದಿಲ್ಲ’ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವೆ ಶಶಿಕಲಾ ಜೊಲ್ಲೆ ಹೇಳಿದರು.

‘ಆ ಯುವತಿ ಹೊಸ ವಿಡಿಯೊದಲ್ಲಿ ಏನು ಹೇಳಿದ್ದಾರೆ ಎನ್ನುವುದನ್ನು ನೋಡಿಲ್ಲ. ನಮ್ಮ ಸರ್ಕಾರ ಆ ಯುವತಿಗೆ ರಕ್ಷಣೆ ನೀಡಲಿದೆ ಎಂದು ಸದನದಲ್ಲಿ ಸ್ವತಃ ಮುಖ್ಯಮಂತ್ರಿ ಮತ್ತು ಗೃಹ ಸಚಿವ ಬಸವರಾಜ ಬೊಮ್ಮಾಯಿ ಭರವಸೆ ನೀಡಿದ್ದಾರೆ’ ಎಂದರು.

‘ಆಕೆಗೆ ಅನ್ಯಾಯ ಆಗಿದೆಯೇ, ಇಲ್ಲವೇ ಎನ್ನುವುದು ಎಸ್‌ಐಟಿ ತನಿಖೆ ಬಳಿಕ ಗೊತ್ತಾಗುತ್ತದೆ. ತನಿಖೆಯ ವರದಿ ಏನೇ ಬರಲಿ, ನನ್ನ ಇಲಾಖೆಯಿಂದ ಆಕೆ ರಕ್ಷಣೆ ಕೇಳಿದರೆ, ಕೊಡಲು ಸಿದ್ಧ’ ಎಂದು ಅವರು ಹೇಳಿದರು.